ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 63 ಗ್ರಾಪಂಅ 2019 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:14-02-2019.

## ಸುತ್ತೋಲೆ

ವಿಷಯ: ರಾಜ್ಯದ ಗ್ರಾಮ ಪಂಚಾಯತಿಗಳು ಅಕ್ರಮವಾಗಿ ಗ್ರಾಮ ಪಂಚಾಯತಿ ನೌಕರರನ್ನು ನೇಮಕಾತಿ ಮಾಡಿಕೊಳ್ಳುತ್ತಿದ್ದು, ಅಕ್ರಮ ನೇಮಕಾತಿಗಳನ್ನು ರದ್ದುಪಡಿಸಿ ಸಂಬಂಧಿಸಿದವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 74 ಗ್ರಾಪಂಸಿ 2017 (ಭಾಗ-1), ದಿನಾಂಕ: 12-03-2018.

****

ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ದಿನಾಂಕ:12-03-2018 ಜಾರಿಗೆ ಬರುವಂತೆ ಗ್ರಾಮ ಪಂಚಾಯಿತಿಗಳು ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಒಂದು ಪಕ್ಷ ಬಿಲ್‌ಕಲೆಕ್ಟರ್, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಮತ್ತು ಅಟೆಂಡರ್ ಹುದ್ದೆಗಳು ನಿವೃತ್ತಿ, ಮುಂಬಡ್ತಿ ಹಾಗೂ ಇನ್ನಿತರ ಕಾರಣಗಳಿಂದ ಖಾಲಿಯಾದಲ್ಲಿ ನೇಮಕಾತಿ ಮಾಡಿಕೊಳ್ಳಲು ಸಕಾರಣಗಳೊಡನೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆದು ನೇಮಕಾತಿ ಮಾಡಿಕೊಳ್ಳಲು ಮತ್ತು ವಾಟರ್‌ಮೆನ್/ಪಂಪ್ ಆಪರೇಟರ್/ಪಂಪ್ ಮೆಕ್ಯಾನಿಕ್ ಮತ್ತು ಸ್ವಚ್ಛತಾಗಾರ ಹುದ್ದೆಗಳಲ್ಲಿ ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಿನ ಸಂಖ್ಯೆಯ ನೌಕರರು ಇದ್ದಲ್ಲಿ ಗ್ರಾಮ ಪಂಚಾಯಿತಿಗಳು ಹೊಸದಾಗಿ ನೇಮಿಸದೆ ಖಾಲಿಯಾಗುವ ಹುದ್ದೆಗಳಿಗೆ ಗ್ರಾಮ ಪಂಚಾಯಿತಿಗಳಲ್ಲಿ ಹೆಚ್ಚುವರಿ ಇರುವ ನೌಕರರಿಂದ ಜೇಷ್ಠತೆ ಆಧರಿಸಿ ಹೊಂದಾಣಿಕೆ ಮಾಡುವುದು. ಈ ಪ್ರಕ್ರಿಯೆಯ ನಂತರವೂ ಮಂಜೂರಾದ ಹುದ್ದೆಗಳಲ್ಲಿಯೇ ಖಾಲಿ ಬಿದ್ದಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆದು ನೇಮಕಾತಿ ಮಾಡಿಕೊಳ್ಳುವಂತೆ ತಿಳಿಸಲಾಗಿದೆ. ಉಲ್ಲೇಖಿತ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಉಲ್ಲಂಘಿಸಿ ಯಾವುದೇ ನೌಕರರ ಅಕ್ರಮ ನೇಮಕಾತಿಗೆ ಕಾರಣರಾದ ಅಂತಹ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಹಾಗೂ ಅಂತಹ ಕಾನೂನುಬಾಹಿರ ನಿರ್ಣಯಕ್ಕೆ ಭಾಗಿಯಾದ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48 (4) ಮತ್ತು 48(5) ರನ್ವಯ ಕ್ರಮ ಜರುಗಿಸಲಾಗುವುದು. ಯಾವುದೇ ಹಂತದಲ್ಲಿ ಲೋಪವಾದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದೆಂದೂ ಸೂಚಿಸಲಾಗಿತ್ತು.

ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯತಿಗಳು ಗ್ರಾಮ ಪಂಚಾಯತಿ ಸಾಮಾನ್ಯ ಸಭೆ / ವಿಶೇಷ ಸಭೆಗಳಲ್ಲಿ ನೌಕರರ ನೇಮಕಾತಿಗೆ ನಿರ್ಣಯ ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯತಿಗಳು ಗ್ರಾಮ ಪಂಚಾಯತಿ ಸಾಮಾನ್ಯ ಸಭೆ / ವಿಶೇಷ ಸಭೆಗಳಲ್ಲಿ ನೌಕರರ ನೇಮಕಾತಿಗೆ ನಿರ್ಣಯ ತೆಗೆದುಕೊಂಡಿದ್ದರೂ ಇಂತಹ ನಿಯಮಬಾಹಿರ ಅಕ್ರಮ ನೇಮಕಾತಿಗಳನ್ನು ರದ್ದುಪಡಿಸುವಂತೆ ತಿಳಿಸಿದೆ. ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಹಾಗೂ ಅಂತಹ ಕಾನೂನುಬಾಹಿರ ನಿರ್ಣಯಕ್ಕೆ ಭಾಗಿಯಾದ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48 (4) ಮತ್ತು 48(5) ರನ್ವಯ ಕ್ರಮ ಜರುಗಿಸಲು ಕ್ರಮ ವಹಿಸುವಂತೆ ತಿಳಿಸಿದೆ.

50

ಮೇಲ್ಕಂಡಂತೆ ಯಾವುದೇ ಹಂತದಲ್ಲಿ ಲೋಪವಾದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಶಿಸ್ತು ಕ್ರಮ ಜರುಗಿಸಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತೊಮ್ಮೆ ತಿಳಿಸಿದೆ.

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್‌ಗಳು.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು.
2. ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.